ಅ) .ಬಸವ ಕಲ್ಯಾಣದ ಸಸ್ತಾಪುರದಲ್ಲಿ 110 ಕೆವಿ ಪವರ್ ಸ್ಟೇಷನ್ ಅನ್ನು ಮಾಡಲು ಭೂಮಿಯನ್ನು ವಶಪಡಿಸಿಕೊಂಡಿದ್ದು, ಇದುವರೆಗೂ ಕ್ರಮ ತೆಗೆದುಕೊಳ್ಳದಿರುವುದು ನಿಜವೆ?

ಆ) ಸಸ್ತಾಪುರ ಗ್ರಾಮದಲ್ಲಿ ವಿದ್ಯುತ್ ಸರಬರಾಜು ಸರಿಯಾದ ರೀತಿಯಲ್ಲಿ ಆಗದೆ ರೈತರ ಪಂಪುಸೆಟ್ಟುಗಳು ಹಾಳಾಗುತ್ತಿರುವುದರಿಂದ ಅಲ್ಲಿ ಪವರ್ ಸ್ಟೇಷನ್ ಅನ್ನು ಪ್ರಾರಂಭಿಸಲು ಸರ್ಕಾರ ಶೀಘ್ರವಾಗಿ ಕ್ರಮ ತೆಗೆದುಕೊಳ್ಳುವುದೇ?

ಶ್ರೀ ಕೆ.ಎ. ನಿಸಾರ್ ಅಹಮದ್ (ಇಂಧನ ರಾಜ್ಯ ಸಚಿವರು);

ಅ) ಬಸವಕಲ್ಯಾಣದ ಸಸ್ತಾಪುರದಲ್ಲಿ ನಿರ್ಮಾಣ ಮಾಡಲು ಉದ್ದೇಶಿಸಿರುವ 110 ಕೆವಿ ಪವರ್ ಸ್ಟೇಷನ್‌ಗೆ ಬೇಕಾಗುವ ಭೂಮಿಯನ್ನು ಇದುವರೆವಿಗೆ ವಶಪಡಿಸಿಕೊಂಡಿಲ್ಲ. ಆದ್ದರಿಂದ ನಿರ್ಮಾಣ ಕಾರ್ಯವನ್ನು ಪ್ರಾರಂಭಿಸಿಲ್ಲ.

ಆ) ಭೂಮಿ ಸ್ವಾಧೀನದ ಕಾರ್ಯವು ಪ್ರಗತಿಯಲ್ಲಿದೆ ಭೂಮಿಯನ್ನು ಸ್ವಾಧೀನಪಡಿಸಿಕೊಂಡ ನಂತರ ನಿರ್ಮಾಣ ಕಾರ್ಯವನ್ನು ಆದಷ್ಟು ಜಾಗ್ರತೆ ಪ್ರಾರಂಭಿಸಲಾಗುವುದು. ಅಲ್ಲದೇ ಸಸ್ತಾಪುರದ ಉದ್ದೇಶಿತ 110 ಕೆವಿ ವಿದ್ಯುತ್ ಉಪಕೇಂದ್ರಕ್ಕೆ. ವಿದ್ಯುತ್ ಸರಬರಾಜು ಮಾಡಲು ಹುಮ್ನಾಬಾದ್ನಲ್ಲಿ 220:110 ಕೆವಿ ವಿದ್ಯುತ್ ಸ್ವೀಕರಣಾ ಕೇಂದ್ರವನ್ನು ಚಾಲನೆಗೊಳಿಸುವುದು ಬಹಳ ಅಗತ್ಯವಾಗಿದೆ. ಆದ್ದರಿಂದ ಮಂಡಳಿಯು ಹುಮ್ನಾಬಾದ್ನಲ್ಲಿ 220:110 ಕೆವಿ ವಿದ್ಯುತ್ ಸ್ವೀಕರಣಾ ಕೇಂದ್ರವನ್ನು ತ್ವರಿತಗತಿಯಲ್ಲಿ ಚಾಲನೆಗೊಳಿಸುವ ಬಗ್ಗೆ ತೀವ್ರ ರೀತಿಯಲ್ಲಿ ಕ್ರಮ ತೆಗೆದುಕೊಳ್ಳುತ್ತಿದೆ.

ಬಸವಕಲ್ಯಾಣದಲ್ಲಿ ಲೋಕೋಪಯೋಗಿ ಇಲಾಖೆಯ ಉಪ ವಿಬಾಗವನ್ನು ಪ್ರಾರಂಭಿಸುವ ಬಗ್ಗೆ

333 - ಶ್ರೀ ಬಸವರಾಜ್ ಪಾಟೀಲ್ ಅಟ್ಟೂರ್ (ಬಸವ ಕಲ್ಯಾಣ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯ ಬಸವಕಲ್ಯಾಣದಲ್ಲಿ ಮಂಜೂರಾಗಿರುವ ಲೋಕೋಪಯೋಗಿ ಉಪ ವಿಭಾಗವು ಯಾವಾಗ ಪ್ರಾರಂಭವಾಗುವುದು?

ಆ) ಬಸವ ಕಲ್ಯಾಣದಲ್ಲಿ ಉಪ ವಿಭಾಗಾಧಿಕಾರಿಗಳ ಕಛೇರಿ ಭೂ ಸೇನಾ ಉಪ ವಿಭಾಗ ಸಿವಿಲ್ ಕೋರ್ಟ್ಗಳಿದ್ದು, ಲೋಕೋಪಯೋಗಿ ಇಲಾಖೆಯ ಉಪ ವಿಭಾಗವು ಇಲ್ಲದೆ ಇಲಾಖೆಗೆ ಸಂಬಂಧಪಟ್ಟ ಕೆಲಸ ಕಾರ್ಯಗಳು ಸಾಗಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ ಉಪ ವಿಭಾಗವನ್ನು ಈ ವರ್ಷದಲ್ಲಿ ಪ್ರಾರಂಭಿಸಲು ಕ್ರಮ ತೆಗೆದುಕೊಳ್ಳಲಾಗುವುದೇ?

ಶ್ರೀ ಕೆ.ಹೆಚ್. ರಂಗನಾಥ್ (ಲೋಕೋಪಯೋಗಿ ಸಚಿವರು);

ಅ) ಬೀದರ್ ಜಿಲ್ಲೆಯ ಬಸವಕಲ್ಯಾಣದಲ್ಲಿ ಲೋಕೋಪಯೋಗಿ ಇಲಾಖೆಯ ಯಾವ ಉಪ ವಿಭಾಗವು ಮಂಜೂರಾಗಿರುವುದಿಲ್ಲ, ಕಾರಣ ಸದರಿ ಉಪ ವಿಭಾಗ ಕಛೇರಿಯನ್ನು ಪ್ರಾರಂಭಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಆ) - ಇಲ್ಲ -

ಇ) - ಉದ್ಭವಿಸುವುದಿಲ್ಲ-

ಪ್ರತಿ ವಿಧಾನ ಸಭಾ ಕ್ಷೇತ್ರಕ್ಕೆ ವಿಶೇಷ ಅನುದಾನದ ಬಿಡುಗಡೆ

262 - ಶ್ರೀ ಎಂ.ಎಸ್. ಆತ್ಮಾನಂದ (ಮಂಡ್ಯ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?